# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | **834** |
| **ಮಾನ್ಯ ಸದಸ್ಯರ ಹೆಸರು** | : | **ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು)** |
| **ಉತ್ತರಿಸುವ ದಿನಾಂಕ** | : | **13.03.2025** |
| **ಉತ್ತರಿಸುವ ಸಚಿವರು.** | : | **ಗೃಹ ಸಚಿವರು** |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯಾದ್ಯಂತ ಗ್ರಾಮೀಣ ಮತ್ತು ಬುಡಕಟ್ಟು ಜನಾಂಗದ ಪ್ರದೇಶಗಳಲ್ಲಿ ಕಳೆದ ಮೂರು ವರ್ಷಗಳಲ್ಲಿ ದಾಖಲಾದ ಸೈಬರ್ ಪ್ರಕರಣಗಳು ಎಷ್ಟು; ಅವುಗಳಲ್ಲಿ ವಿಲೇವಾರಿ ಮಾಡಲಾದ ಪ್ರಕರಣಗಳು ಎಷ್ಟು; (ವರ್ಷಾವಾರು ಮಾಹಿತಿ ನೀಡುವುದು) | ರಾಜ್ಯಾದ್ಯಂತ ಗ್ರಾಮೀಣ ಮತ್ತು ಬುಡಕಟ್ಟು ಜನಾಂಗದ ಪ್ರದೇಶಗಳಲ್ಲಿ ಕಳೆದ ಮೂರು ವರ್ಷಗಳಲ್ಲಿ ದಾಖಲಾದ ಸೈಬರ್ ಪ್ರಕರಣಗಳ ಸಂಖ್ಯೆ ಈ ಕೆಳಕಂಡಂತಿದೆ:- |

| ವರ್ಷ | ಬುಡಕಟ್ಟು ಪ್ರದೇಶಗಳಲ್ಲಿನ ಸೈಬರ್ ಅಪರಾಧ ಪ್ರಕರಣಗಳು | | ಗ್ರಾಮೀಣ ಪ್ರದೇಶಗಳಲ್ಲಿನ ಸೈಬರ್ ಅಪರಾಧ ಪ್ರಕರಣಗಳು | |
|---|---|---|---|---|
| | ದಾಖಲಾದ ಪ್ರಕರಣಗಳ ಸಂಖ್ಯೆ | ವಿಲೇವಾರಿಯಾದ ಪ್ರಕರಣಗಳ ಸಂಖ್ಯೆ | ದಾಖಲಾದ ಪ್ರಕರಣಗಳ ಸಂಖ್ಯೆ | ವಿಲೇವಾರಿಯಾದ ಪ್ರಕರಣಗಳ ಸಂಖ್ಯೆ |
| 2022 | 0 | 0 | 880 | 521 |
| 2023 | 1 | 0 | 1417 | 553 |
| 2024 | 12 | 0 | 1600 | 533 |
| 2025 (ಫೆಬ್ರುವರಿ, 28) | 0 | 0 | 191 | 1 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಆ) | ಸೈಬರ್ ಅಪರಾಧ ನಡೆದ ತಕ್ಷಣ ಪತ್ತೆಗೆ ಕೈಗೊಳ್ಳುವ ನಿಟ್ಟಿನಲ್ಲಿ ಪೊಲೀಸರಿಗೆ ಯಾವ ರೀತಿಯ ತಾಂತ್ರಿಕ ತರಬೇತಿ ಮತ್ತು ಸೌಲಭ್ಯಗಳನ್ನು ನೀಡಲಾಗಿದೆ; (ಸಂಪೂರ್ಣ ಮಾಹಿತಿ ನೀಡುವುದು) | 2024ನೇ ಸಾಲಿನಿಂದ ಈವರೆಗೆ ಸೈಬರ್ ಅಪರಾಧ ಪತ್ತೆ ಕುರಿತು ಪೊಲೀಸರಿಗೆ ನೀಡಿರುವ ತರಬೇತಿಯ ಅಂಕಿ-ಅಂಶಗಳು:- |

| ಕ್ರಮ ಸಂ | ಸೈಬರ್ ಅಪರಾಧ ತರಬೇತಿ | ತರಬೇತಿ ಪಡೆದವರ ಸಂಖ್ಯೆ |
|---|---|---|
| 01 | ಕನಾಟಕ ರಾಜ್ಯ ಪೊಲೀಸ್ ಅಧಿಕಾರಿ/ ಸಿಬ್ಬಂದಿಯವರುಗಳಿಗೆ ಸೈಬರ್ ಅಪರಾಧ ಬಗ್ಗೆ ಲೆವಲ್-1, ಲೆವಲ್-2 ಹಾಗೂ ಅಧುನಿಕ ಸುಧಾರಿತ ತರಬೇತಿ | 1938 |
| 02 | ಕನಾಟಕ ರಾಜ್ಯ ಪೊಲೀಸ್ ಅಧಿಕಾರಿ/ ಸಿಬ್ಬಂದಿಯವರುಗಳಿಗೆ ಸೈಬರ್ ಅಪರಾಧ ಬಗ್ಗೆ ಆನ್‌ಲೈನ್ ತರಬೇತಿ | 7457 |
| | **ಒಟ್ಟು** | 9395 |

| | | |
|---|---|---|
| | ಇ) ಗ್ರಾಮೀಣ ಮತ್ತು ಬುಡಕಟ್ಟು ಜನಾಂಗಗಳು ವಾಸಿಸುವ ಪ್ರದೇಶಗಳಲ್ಲಿ ಸೈಬರ್ ಅಪರಾಧಗಳ ಕುರಿತು ಸಾರ್ವಜನಿಕರಿಗೆ ಅರಿವು ಮೂಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು) | ➢ ಸೈಬರ್ ವಂಚನೆಗೊಳಗಾದ ಶೋಷಿತರ ಅನುಕೂಲಕ್ಕಾಗಿ ಪ್ರತಿ ಜಿಲ್ಲೆಯಲ್ಲಿ ಹಾಗೂ ನಗರ ವಾಪ್ತಿಯಲ್ಲಿ ಒಂದೊಂದು ಸೈಬರ್ ಪೊಲೀಸ್ ಠಾಣೆಗಳನ್ನು (ಸಿ.ಇ.ಎನ್ ಪೊಲೀಸ್ ಠಾಣೆ) ತೆರೆಯಲಾಗಿರುತ್ತದೆ. ಅಲ್ಲದೇ, ಪೊಲೀಸ್ ಮಹಾನಿರ್ದೇಶಕರು ಕರ್ನಾಟಕ ರಾಜ್ಯ ರವರ ಆದೇಶದಂತೆ ಸೈಬರ್ ಅಪರಾಧಗಳಿಗೆ ಸಂಬಂಧಿಸಿದಂತೆ ಸಾರ್ವಜನಿಕರು ಕರ್ನಾಟಕ ರಾಜ್ಯದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಇತರೆ ಪೊಲೀಸ್ ಠಾಣೆಗಳಲ್ಲಿ ಸಹ ದೂರನ್ನು ದಾಖಲಿಸಬಹುದಾಗಿದೆ, ಅಲ್ಲದೆ ಸೈಬರ್ ಕ್ರೈಂನಿಂದ ವಂಚಿತರಾದವರು ದೂರನ್ನು ನೀಡಲು ಉಚಿತ ಸಹಾಯವಾಣಿ 1930 ಸೇವೆಯನ್ನು ಕಾರ್ಯನಿರ್ವಹಿಸುತ್ತಿರುತ್ತದೆ ಮತ್ತು ಸಾರ್ವಜನಿಕರು NCRP ಪೋರ್ಟಲ್ ಮೂಲಕ ಸಹ ದೂರನ್ನು ದಾಖಲಿಸಬಹುದಾಗಿದೆ.<br>➢ ಗ್ರಾಮೀಣ ಪ್ರದೇಶಗಳಲ್ಲಿ ಸೈಬರ್ ಅಪರಾಧಗಳ ಕುರಿತು ಸಾರ್ವಜನಿಕರಿಗೆ ಅರಿವು ಮೂಡಿಸುವ ಸಲುವಾಗಿ ಬೀಟ್ ಸಭೆಗಳಲ್ಲಿ ಸೈಬರ್ ವಂಚನೆಗಳ ಬಗ್ಗೆ ಹಾಗೂ ಇದರಿಂದ ಮೋಸ ಹೋಗದಂತೆ ಸೂಕ್ತ ಮುಂಜಾಗ್ರತೆ ವಹಿಸುವ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಲಾಗುತ್ತಿದೆ.<br>➢ ಕಾಲ ಕಾಲಕ್ಕೆ ಉದ್ಯೋಗ ಸ್ಥಳಗಳಲ್ಲಿ ಜಾಗೃತಿ ಮೂಡಿಸುತ್ತಿದ್ದು, ಸಾಮಾಜಿಕ ಜಾಲತಾಣಗಳಾದ ವಾಟ್ಸ್ಆಪ್, ಟ್ವಿಟರ್, ಫೇಸ್‌ಬುಕ್‌ಗಳ ಮೂಲಕ ಮತ್ತು ಸರ್ಕಾರಿ ವೆಬ್‌ಸೈಟ್‌ಗಳ ಮೂಲಕ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ.<br>➢ ಸೈಬರ್ ಅಪರಾಧಗಳ ಕುರಿತು ಸಾರ್ವಜನಿಕರಿಗೆ, ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ, ಚಾಲಕರಿಗೆ, ಮಹಿಳೆಯರಿಗೆ, ಕೂಲಿ ಕಾರ್ಮಿಕರಿಗೆ ಅರಿವು ಮೂಡಿಸಲು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿರುತ್ತದೆ.<br>➢ ಮೊಬೈಲ್‌ಗಳಲ್ಲಿ ಬರುವ ಆನ್‌ಲೈನ್‌ನಲ್ಲಿ ಬರುವ ಜಾಹಿರಾತುಗಳಿಂದ ಹಣದ ಆಮೀಷಗಳಿಗೆ ಒಳಗಾಗದಂತೆ ಪೊಲೀಸ್ ಇಲಾಖೆಯ ಸಾಮಾಜಿಕ ಜಾಲತಾಣದ ಮುಖಾಂತರ ಸಾರ್ವಜನಿಕರಿಗೆ ಮಾಹಿತಿ ನೀಡಿ ಜಾಗೃತಿ ಮೂಡಿಸಲಾಗುತ್ತಿದೆ.<br>➢ ಗ್ರಾಮೀಣ ಪ್ರದೇಶಗಳಲ್ಲಿ ರೈತರಿಗೆ ಹಾಗೂ ಮಹಿಳೆಯರಿಗೆ ಸರ್ಕಾರದ ಯೋಜನೆಗಳ ಹೆಸರಿನಲ್ಲಿ ಕರೆ ಮಾಡಿ ಬ್ಯಾಂಕ್ ಖಾತೆಗಳ ಮಾಹಿತಿ ಹಂಚಿಕೊಳ್ಳುವಂತೆ ಬರುವ ನಕಲಿ ಕರೆಗಳ ಬಗ್ಗೆ ಎಚ್ಚರ ವಹಿಸುವಂತೆ ಹಾಗೂ ಯಾವುದೇ ಅನಧೀಕೃತ ವ್ಯಕ್ತಿಗಳಿಗೆ ಬ್ಯಾಂಕ್ ಖಾತೆಗಳ ಮಾಹಿತಿ ಓಟಿಪಿ, ಎಟಿಎಮ್ ಕಾರ್ಡ್ ನಂಬರ್ ಅಥವಾ ಇನ್ನಾವುದೇ ಮಾಹಿತಿ ಹಂಚಿಕೊಳ್ಳದಂತೆ ಜಾಗೃತಿ ಮೂಡಿಸಲಾಗುತ್ತಿದೆ.<br>➢ ರಾಜ್ಯದಲ್ಲಿ ಸೈಬರ್ ಕ್ರೈಂ ಪ್ರಕರಣಗಳನ್ನು ತಡೆಹಿಡಿಯಲು ಮತ್ತು ಇಂತಹ ಪ್ರಕರಣಗಳಲ್ಲಿ ನೊಂದವರಿಗೆ ನ್ಯಾಯ ದೊರಕಿಸಲು ದೇಶದಾದ್ಯಂತ 1930 ಸೈಬರ್ ಕ್ರೈಂ ಸಹಾಯವಾಣಿಯನ್ನು ತೆರೆದಿದ್ದು, ನೊಂದವರು ಪ್ರಥಮ ಬಾರಿಗೆ 1930 ದಲ್ಲಿ ಕರೆ ಮಾಡಿ ಮೋಸ ಹೋಗಿರುವ ಬಗ್ಗೆ ದಿನದ 24 ಗಂಟೆಗಳೂ ಸಹ ದೂರು ದಾಖಲಿಸಬಹುದೆಂಬ ಕುರಿತು ಅರಿವು ಮೂಡಿಸಲಾಗುತ್ತಿರುತ್ತದೆ ಹಾಗೂ ಪ್ರತಿ ಜಿಲ್ಲೆಯಲ್ಲಿ ಒಂದು ಸೈಬರ್ ಪೊಲೀಸ್ ಠಾಣೆಯನ್ನು ತೆರೆಯಲಾಗಿದ್ದು, ಎಲ್ಲಾ ಠಾಣೆಗಳಲ್ಲಿ ಸೈಬರ್ ಲ್ಯಾಬ್‌ಗಳನ್ನು ಒದಗಿಸಲಾಗಿರುತ್ತದೆ ಹಾಗೂ ಸಿಐಡಿ ಬೆಂಗಳೂರು ರವರಿಂದ ಕಾಲ |

| | | |
|---|---|---|
| | | ಕಾಲಕ್ಕೆ ಅಧಿಕಾರಿ ಮತ್ತು ಸಿಬ್ಬಂದಿಯವರಿಗೆ ಸೈಬರ್ ಕ್ರೈಂ ತನಿಖೆ ಬಗ್ಗೆ ತರಬೇತಿಯನ್ನು ನೀಡಲಾಗುತ್ತಿದೆ.<br>➢ ಠಾಣಾ ಮಟ್ಟದಲ್ಲಿ ಶಾಲಾ / ಕಾಲೇಜುಗಳಿಗೆ ತೆರಳಿ ವಿದ್ಯಾರ್ಥಿಗಳಿಗೆ ಫೇಸ್‌ಬುಕ್, ಇನ್‌ಸ್ಟ್ಯಾಗ್ರಾಂ, ಹಾಗೂ ವಾಟ್ಸಾಪ್ ಇತರೆ ಸಾಮಾಜಿಕ ಜಾಲತಾಣಗಳಲ್ಲಿ ಯಾವುದೇ ಅಪರಿಚಿತ ವ್ಯಕ್ತಿಗಳಿಂದ ಬರುವಂತಹ ಫ್ರೆಂಡ್ ರಿಕ್ವೇಸ್ಟ್ ಅಕ್ಸೆಪ್ಟ್ ಮಾಡದಂತೆ ಹಾಗೂ ಆ ಅಪರಿಚಿತ ವ್ಯಕ್ತಿಗಳೊಂದಿಗೆ ಯಾವುದೇ ಖಾಸಗಿ ಮಾಹಿತಿಗಳನ್ನು ಹಾಗೂ ಫೋಟೋಗಳನ್ನು ಯಾವುದೇ ದಾಖಲಾತಿಗಳನ್ನು ಹಂಚಿಕೊಳ್ಳದಂತೆ ಶಾಲಾ ಕಾಲೇಜುಗಳಲ್ಲಿ ಸೈಬರ್ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಜಾಗೃತಿ ಮೂಡಿಸಲಾಗುತ್ತಿದೆ. ಜೊತೆಗೆ ರೇಡಿಯೋ ಪ್ರಸಾರ ಕಾರ್ಯಕ್ರಮಗಳನ್ನು ಸಹ ಮಾಡಲಾಗಿದೆ. ಎಲ್ಲಾ ಸಾರ್ವಜನಿಕ ಸ್ಥಳಗಳಲ್ಲಿ ಕರಪತ್ರ ಹಾಗೂ ಭಿತ್ತಿಪತ್ರಗಳನ್ನು ಹಾಕಿಸಿ ಸೈಬರ್ ಅಪರಾಧಗಳಿಂದ ವಂಚನೆಗೊಳಗಾದಂತೆ ಬಗ್ಗೆ ಅರಿವು ಮೂಡಿಸಲಾಗುತ್ತಿದೆ.<br>➢ ಅಲ್ಲದೇ ಸಾಮಾಜಿಕ ಜಾಲತಾಣಗಳ ಮೂಲಕ ಸಾರ್ವಜನಿಕರಿಗೆ/ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳಿಗೆ ಸೈಬರ್ ವಂಚನೆಗೊಳಗಾಗದಂತೆ ಜಾಗೃತಿ ಕಾರ್ಯಕ್ರಮ ಮಾಡಲಾಗುತ್ತಿದೆ. |

ಸಂಖ್ಯೆ: ಹೆಚ್‌ಡಿ 18 ಪಿಸಿಕ್ಯೂ 2025

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು